ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಉಪನಿರ್ದೇಶಕರ ಕಚೇರಿ, ವಾರ್ತಾಭವನ, ಧನ್ವಂತರಿ ರಸ್ತೆ, ಮೈಸೂರು-570001, ದೂರವಾಣಿ:0821-2423251,
ಫ್ಯಾಕ್ಸ್0821-2423251 ಇ-ಮೇಲ್: mysorevarthabhavan@gmail.com
ಗ್ರೂಪ್ ವೆಬ್‌ಸೈಟ್: http://groups.google.com/group/mysorevarthabhavan

18ನೇ ಡಿಸೆಂಬರ್ 2016

# ಗ್ರಾಮೀಣ ಪ್ರದೇಶದ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಮೊದಲ ಆದ್ಯತೆ: ಸಿದ್ದರಾಮಯ್ಯ



ಮೈಸೂರು..18:- ಗ್ರಾಮೀಣ ಪ್ರದೇಶದಲ್ಲಿ ಜನರ ಹಾಗೂ ಜಾನುವಾರುಗಳ ಕುಡಿಯುವ ನೀರು ಸಮಸ್ಯೆ ನಿವಾರಣೆಗೆ ಸರ್ಕಾರ ಮೊದಲ ಆದ್ಯತೆ ನೀಡುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಭಾನುವಾರ ನಂಜನಗೂಡು ತಾಲ್ಲೂಕು ಹುರ ಹಾಗೂ ಇತರ 28 ಕೆರೆಗಳಿಗೆ 45 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಕುಡಿಯುವ ಉದ್ದೇಶಕ್ಕೆ ನೀರು ತುಂಬಿಸುವ ಯೋಜನೆಗೆ ಶಿಲಾನ್ಯಾಸ ನೆರವೇರಿಸಿ ಅವರು ಮಾತನಾಡಿದರು.

ನಂಜನಗೂಡು ತಾಲ್ಲೂಕಿನ ಕಾಡಂಚಿನ 30 ಗ್ರಾಮಗಳು, ಪಕ್ಕದಲ್ಲೇ ನದಿ ಹರಿಯುತ್ತಿದ್ದರೂ ಕುಡಿಯಲು ನೀರಿಲ್ಲದೆ ತೊಂದರೆ ಅನುಭವಿಸಿವೆ. ಈ ಹಿಂದೆ ಈ ಭಾಗ ಪ್ರತಿನಿಧಿಸಿದ ಯಾರೂ ಇದನ್ನು ನನ್ನ ಗಮನಕ್ಕೆ ತಂದಿರಲಿಲ್ಲ. ನಮ್ಮ ಸರ್ಕಾರ ಬಂದು ಮೂರೂವರೆ ವರ್ಷ ಆಯಿತು. ಮೊದಲೇ ನನ್ನ ಗಮನಕ್ಕೆ ತಂದಿದ್ದರೆ ಈಗಾಗಲೇ ಕಾಮಗಾರಿ ಮುಗಿಸಿ, ಕೆರೆಗಳಿಗೆ ನೀರು ಕೊಡಲು ಕ್ರಮ ಕೈಗೊಳ್ಳುತ್ತಿದ್ದೆವು ಎಂದು ಹೇಳಿದರು.

ಈ ಯೋಜನೆಯೂ ಸೇರಿದಂತೆ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ 100 ಕೆರೆಗಳಿಗೆ ಕುಡಿಯಲು ನೀರು ತುಂಬಿಸುವ ಯೋಜನೆಗಳು ಪ್ರಗತಿಯಲ್ಲಿವೆ. ಇನ್ನು ಒಂದೂ – ಒಂದೂವರೆ ವರ್ಷದಲ್ಲಿ ಎಲ್ಲಾ ಯೋಜನೆಗಳು ಪೂರ್ಣಗೊಳ್ಳಲಿವೆ ಎಂದರು.

ಕಳೆದ ಮೂರುವರೆ ವರ್ಷದಲ್ಲಿ ನಮ್ಮ ಸರ್ಕಾರ ಕುಡಿಯುವ ನೀರು ಹಾಗೂ ನೀರಾವರಿಗೆ 40 ಸಾವಿರ ಕೋಟಿ ರೂ. ವಿನಿಯೋಗಿಸಿದೆ. ಈ ಸರ್ಕಾರದ ಅವಧಿ ಪೂರ್ಣಗೊಳ್ಳುವ ಮುನ್ನ ಸುಮಾರು 60 ಸಾವಿರ ಕೋಟಿ ರೂ.ಗಳನ್ನು ಈ ಉದ್ದೇಶಕ್ಕೆ ವಿನಿಯೋಗಿಸಿ, ನಾಲೆಗಳ ಆಧುನೀಕರಣ ಹಾಗೂ ನೀರಾವರಿ ಪ್ರದೇಶ ವಿಸ್ತರಣೆ ಮಾಡಲಾಗುವುದು. ದಕ್ಷಿಣ ವಲಯದಲ್ಲಿಯೆ 2917 ಕೋಟಿ ರೂ.ಗಳಷ್ಟು ವಿನಿಯೋಗಿಸಲಾಗಿದೆ. ಹಿಂದಿನ ಯಾವ ಸರ್ಕಾರಗಳು ಸಹ ಈ ಪ್ರಮಾಣದಲ್ಲಿ ನೀರಾವರಿಗೆ ಆದ್ಯತೆ ನೀಡಿರಲಿಲ್ಲ ಎಂದರು.

ಕಳೆದ ವರ್ಷ 136 ತಾಲ್ಲೂಕುಗಳನ್ನು ಬರ ಪೀಡಿತ ಎಂದು ಘೋಷಿಸಲಾಗಿತ್ತು. ಈ ವರ್ಷ 139 ತಾಲ್ಲೂಕುಗಳನ್ನು ಈ ವರೆಗೆ ಘೋಷಿಸಲಾಗಿದೆ. ಕರ್ನಾಟಕದ ಜಲಾಶಯಗಳು ಈ ವರ್ಷ ಅರ್ಧದಷ್ಟು ತುಂಬಿಲ್ಲ. ಇಂತಹ ಪರಿಸ್ಥಿತಿಯಲ್ಲಿಯೂ ಸಹ ಕಷ್ಟಪಟ್ಟು ರೈತರ ಬೆಳೆಗಳಿಗೆ ನೀರು ಹರಿಸಲಾಗಿದೆ ಎಂದು ಹೇಳಿದರು.

ನಂಜನಗೂಡು ಭಾಗದ ಅರಣ್ಯ ಪ್ರದೇಶದ ಗ್ರಾಮಗಳಲ್ಲಿ ಆನೆಗಳ ಹಾವಳಿ ಇದೆ. ಇದರ ನಿಯಂತ್ರಣಕ್ಕಾಗಿ 125 ಕೋಟಿ ರೂ. ಖರ್ಚು ಮಾಡಿ ರೈಲ್ವೇ ಕಂಬಿಗಳನ್ನು ಅಳವಡಿಸಲಾಗುತ್ತಿದೆ. ನುಗು ಜಲಾಶಯಕ್ಕೆ ನದಿಯಿಂದ ನೀರು ಕೊಡಬೇಕು ಎಂಬ ಬೇಡಿಕೆ ಇದೆ. ಆ ಯೋಜನೆಯನ್ನು ಕೈಗೊಳ್ಳಲಾಗುವುದು ಎಂದರು.

ಬಹುಗ್ರಾಮ ಕುಡಿಯುವ ನೀರು ಯೋಜನೆಯಡಿ ನಂಜನಗೂಡು ತಾಲ್ಲೂಕು ಹುಲ್ಲಹಳ್ಳಿ ಹಾಗೂ ಇತರ 124 ಗ್ರಾಮಗಳಿಗೆ ಕುಡಿಯುವ ನೀರು ಒದಗಿಸಲು ಕಾಮಗಾರಿ ಪ್ರಗತಿಯಲ್ಲಿದೆ. 2017ರ ಮಾರ್ಚ್ ಅಥವಾ ಏಪ್ರಿಲ್ ವೇಳೆಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಇದರಿಂದ ಈ ಗ್ರಾಮಗಳಲ್ಲಿ ಫ್ಲೋರೈಡ್ ಮುಕ್ತ ನೀರು ಲಭ್ಯವಾಗಿ ಜನರ ಆರೋಗ್ಯ ಸುಧಾರಣೆಯಾಗುತ್ತದೆ ಎಂದರು.

ಬರದ ಹಿನ್ನೆಲೆಯಲ್ಲಿ ಎಲ್ಲಾ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಲಾಗಿದೆ. ಕುಡಿಯುವ ನೀರು, ಜಾನುವಾರುಗಳಿಗೆ ಮೇವು, ಜನರಿಗೆ ಉದ್ಯೋಗ ಸಿಗಬೇಕು ಎಂದು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ಕೊಟ್ಟಿದ್ದೇನೆ. ಈ ಸಮರ್ಪಕವಾಗಿ ನಡೆಯುತ್ತಿದೆಯೇ ಎಂದು ಪರಿಶೀಲಿಸಲು, ಸಚಿವ ಸಂಪುಟದ 4 ಉಪ ಸಮಿತಿಗಳನ್ನು ರಚಿಸಿದ್ದೇನೆ. ಈ ಸಮಿತಿಗಳು

ಪ್ರತಿ ಜಿಲ್ಲೆಗೆ ಭೇಟಿ ನೀಡಬೇಕು ಎಂದು ಸೂಚನೆ ನೀಡಿದ್ದೇನೆ. ಸಮಿತಿಯಲ್ಲಿರುವ ಸಚಿವರ ತಂಡಗಳು ಈಗಾಗಲೇ ಹಲವಾರು ಜಿಲ್ಲೆಗಳಿಗೆ ಭೇಟಿ ನೀಡಿದ್ದಾರೆ ಎಂದರು.

ಈ ವರ್ಷದ ಭೀಕರ ಬರಗಾಲದಿಂದ 25 ಸಾವಿರ ಕೋಟಿ ರೂ. ನಷ್ಟು ನಷ್ಟವಾಗಿದೆ. ನಿಯಮಗಳ ಪ್ರಕಾರ 4702 ಕೋಟಿ ರೂ.ಗಳ ಪರಿಹಾರ ಕೇಳಬಹುದು. ಪ್ರವಾಹದಿಂದ 386 ಕೋಟಿ ರೂ.ನಷ್ಟು ನಷ್ಟವಾಗಿದೆ. ಕೇಂದ್ರ ಸರ್ಕಾರಕ್ಕೆ ಈ ಪರಿಹಾರದ ಮೊತ್ತ ಕೇಳಿದ್ದೇನೆ. ಇದಲ್ಲದೆ, ರಾಜ್ಯ ಸರ್ಕಾರದಿಂದಲೂ ಸಹ ಬರ ನಿರ್ವಹಣೆಗಾಗಿ ಹಣ ಬಿಡುಗಡೆ ಮಾಡಿದ್ದೇವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಲೋಕೋಪಯೋಗಿ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ, ಸಹಕಾರ ಮತ್ತು ಸಕ್ಕರೆ ಸಚಿವರಾದ ಹೆಚ್.ಎಸ್. ಮಹದೇವಪ್ರಸಾದ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರಾದ ಟಿ.ಬಿ. ಜಯಚಂದ್ರ, ಜಿಲ್ಲಾ ಪಂಚಾಯಿತಿ ಅಧ್ಯಕ್ಷರಾದ ನಹಿಮಾ ಸುಲ್ತಾನ, ಲೋಕಸಭಾ ಸದಸ್ಯರಾದ ಆರ್. ಧ್ರುವನಾರಾಯಣ್, ಕೃಷ್ಣರಾಜ ಶಾಸಕರಾದ ಎಂ. ಕೆ. ಸೋಮಶೇಖರ್, ಪಿರಿಯಾಪಟ್ಟಣ ಶಾಸಕರಾದ ಕೆ. ವೆಂಕಟೇಶ್, ಮೈಸೂರು ಅರಗು ಮತ್ತು ಬಣ್ಣದ ಕಾರ್ಖಾನೆ ಅಧ್ಯಕ್ಷ ಹೆಚ್.ಎ. ವೆಂಕಟೇಶ್, ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಸಿದ್ದರಾಜು, ಮೈಸೂರು ಮೃಗಾಲಯ ಪ್ರಾಧಿಕಾರದ ಅಧ್ಯಕ್ಷರಾದ ಮಲ್ಲಿಗೆ ವೀರೇಶ್, ಜಿಲ್ಲಾಧಿಕಾರಿ ರಂದೀಪ್ ಡಿ. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಿವಶಂಕರ್, ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಬಿ.ಶಿವಶಂಕರ್ ಮತ್ತಿತರರು ಉಪಸ್ಥಿತರಿದ್ದರು.

*******